**C. C. No:373/2024**
**PW : 1**

(ಇಂದು ದಿನಾಂಕಃ **06-06-2026** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

**ಮುಂದುವರೆದ ಪಾಟೀ ಸವಾಲು ಶ್ರೀ ವಾಯ್ ಎಂ ಜಿ ವಕೀಲರಿಂದಃ**

ನಿಪಿ-1 ನ್ನು ನಾನು ನಗದೀಕರಣಕ್ಕಾಗಿ ನನ್ನ ಖಾತೆ ಇರುವ ಬ್ಯಾಂಕ್ ಗೆ ಹಾಜರು ಪಡಿಸದ ಕಾರಣ ನಾನು ಸಲ್ಲಿಸಿರುವ ದೂರು ಕಾನೂನುಬದ್ಧವಾಗಿಲ್ಲ ಎಂದರೆ ಸರಿಯಲ್ಲ. ನನ್ನ ಹಾಗೂ ಆರೋಪಿಯ ನಡುವೆ ನನ್ನ ದೂರಿನಲ್ಲಿ ತಿಳಿಸಿದಂತೆ ಯಾವುದೇ ರೀತಿ ಹಣಕಾಸಿನ ವ್ಯವಹಾರ ಆಗಿಲ್ಲ ಎಂದರೆ ಸರಿಯಲ್ಲ. ಆರೋಪಿ ನನ್ನಿಂದ ಯಾವತ್ತಿಗೂ ಸಹ ರೂ. 15,00,000/- ಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನನಗಾಗಲೀ ಅಥವಾ ನನ್ನ ತಂದೆಗಾಗಲೀ ಆರೋಪಿ ಪರಿಚಯವಿಲ್ಲ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಆರೋಪಿ ನನ್ನ ತಂದೆಗೆ ಪರಿಚಯವಿದ್ದಾರೆ ಎಂದು ನುಡಿದಿರುತ್ತಾರೆ. ನನ್ನ ತಂದೆ ಅಪ್ಪಾಸಾಹೇಬ ಹಣ ಮರಳಿ ಕೊಡುವಂತೆ ಒತ್ತಾಯ ಮಾಡುತ್ತಿದ್ದರು ಎಂದರೆ ನಮಗೆ ಅಪ್ಪಾಸಾಹೇಬ ಪರಿಚಯವಿಲ್ಲ ಎಂದು ನುಡಿದಿರುತ್ತಾರೆ. ಆರೋಪಿ ಅಪ್ಪಾಸಾಹೇಬ ರವರಿಗೆ ನೀಡಿದ ಖಾಲಿ ಚೆಕ್ ನ್ನು ನಾವು ದುರುಪಯೋಗ ಪಡಿಸಿಕೊಂಡು ಆತನ ವಿರುದ್ಧ ಸುಳ್ಳು ದೂರು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd**/-

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**